ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ತುಂಗಭದ್ರ ಅಣೆಕಟ್ಟೆಯ ನೀರಿನ ಸದ್ಬಳಕೆ ಕುರಿತು

ಶ್ರೀ ಕೆ. ಸಿ. ಕೊಂಡಯ್ಯ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

316 (483) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ತುಂಬಭದ್ರಾ ಅಣೆಕಟ್ಟೆಯ ನೀರಿನ ಸದ್ಬಳಕೆಗೆ ಕೊಪ್ಪಳದ ನವಲಿ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಸಮಾನಾಂತರ ಜಲಾಶಯಕ್ಕೆ ಆಂಧ್ರಪ್ರದೇಶ ವಿರೋಧ ವ್ಯಕ್ತಪಡಿಸಿರುವುದು ನಿಜವೇ;

(ಆ) ಜಲಾಶಯ ನಿರ್ಮಾಣಕ್ಕಾಗಿ ಸರ್ಕಾರ ಈವರೆಗೆ ಒದಗಿಸಿರುವ ಅನುದಾನವೆಷ್ಟು; ಆಂಧ್ರಪ್ರದೇಶದ ವಿರೋಧವನ್ನು ಎದುರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?